**ಸಾಕ್ಷಿಯನ್ನು ದಿಃ26.04.2019 ರಂದು ಕರೆಸಿ ಪ್ರಮಾಣ ಬೋಧಿಸಲಾಯಿತು.**

**ಮುಖ್ಯ ವಿಚಾರಣೆಃ ವಾದಿ ಪರ ಶ್ರೀ. ಪಿ.ವಿ.ಟಿ ವಕೀಲರಿಂದಃ**

ಈಗ ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ನ್ಯಾಯಾಲಯಕ್ಕೆ ಸಲ್ಲಿಸುತ್ತಿದ್ದೇನೆ ಹಾಗೂ ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿರುತ್ತವೆ ಮತ್ತು ಸಂಗತಿಗಳು ಸತ್ಯವಾಗಿರುತ್ತವೆ ಮತ್ತು ನಾನು ಅದಕ್ಕೆ ನನ್ನ ಸಹಿಯನ್ನು ಹಾಕಿರುತ್ತೇನೆ.

ನಮ್ಮ ವಂಶಕ್ಕೆ ಸಂಬಂಧಪಟ್ಟ ವಂಶವೃಕ್ಷದ ಪ್ರಮಾಣಪತ್ರವನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದಾವಾ ಆಸ್ತಿ ನಂ.369/338/305ಕ್ಕೆ ಸಂಬಂಧಪಟ್ಟಂತೆ ಕಂದಾಯ ಕಟ್ಟಿದ ಬಗ್ಗೆ ಸ್ವೀಕೃತಿಯನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ದಾವಾ ಆಸ್ತಿಗಳ ಬಗ್ಗೆ 4 ಪಹಣಿಗಳನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-3 ರಿಂದ 6 ಎಂದು, ದಾವಾ ಆಸ್ತಿಯ ಬಗ್ಗೆ ಎಂಆರ್‌ನ್ನು ನ್ಯಾಯಾಲಯಕ್ಕೆ ಹಾಜರುಪಡಿಸಿದ್ದು ಅದನ್ನು ನಿಪಿ-7 ಎಂದು ಗುರ್ತಿಸಲಾಯಿತು.

**ಪಾಟೀ ಸವಾಲುಃ ವಕೀಲರ ಕೋರಿಕೆ ಮೇರೆಗೆ ಮುಂದೂಡಲಾಯಿತು.**

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಗಣಕೀಕೃತ ಮಾಡಲಾಗಿದೆ.)**

**ಓ ಹೇ ಕೇ ಸರಿ ಇದೆ.**

**(ಎ.ಸಿ.ದಯಾನಂದ ಮೂರ್ತಿ)**
**ಪ್ರಧಾನ ಸಿವಿಲ್ ನ್ಯಾಯಾಧೀಶರು ಮತ್ತು**
**ಜೆ.ಎಂ.ಎಫ್.ಸಿ., ಬಂಗಾರಪೇಟೆ.**